105

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ ನಮೋಶಿ, ಶ್ರೀ ಎಸ್.ವ್ಹಿ. ಸಂಕನೂರ ಹಾಗೂ ಇತರರು ನಿಯಮ 72 ರಡಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ**

**ರಾಜ್ಯದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ 2015 ರಿಂದ ನಿಧನ ನಿವೃತ್ತಿ ರಾಜೀನಾಮೆಯಿಂದ ಹಾಗೂ ಇತರೆ ಕಾರಣಗಳಿಂದ ಖಾಲಿ ಉಳಿದಿರುವ ಬೋಧಕ ಬೋಧಕೇತರ ಹುದ್ದೆಗಳನ್ನು ತುಂಬಿಕೊಳ್ಳದೆ ಇರುವುದರಿಂದ ಸಿಬ್ಬಂದಿ ಕೊರತೆ ಉಂಟಾಗಿ ಶೈಕ್ಷಣಿಕ ಕುಂಠಿತಗೊಳ್ಳುತ್ತಿರುವ ಬಗ್ಗೆ ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.**

**ಉತ್ತರ**

ಸರ್ಕಾರಿ ಆದೇಶ ಸಂಖ್ಯೆ: ಇಪಿ 396 ಎಸ್‌ಇಎಸ್ 2021 ದಿನಾಂಕ: 07.08.2024 ರಲ್ಲಿ 01.01.2016 ರಿಂದ 31.12.2020 ರವರೆಗೆ ರಾಜ್ಯದ ಅನುದಾನಿತ ಪ್ರೌಢಶಾಲೆ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಾದ ಬೋದಕ ಹುದ್ದೆಗಳ ನೇಮಕಾತಿಗೆ ಅನುಮತಿ ನೀಡಲಾಗಿರುತ್ತದೆ.

ಸದರಿ ದಿನಾಂಕ: 07.08.2024ರಲ್ಲಿ ಆದೇಶದಲ್ಲಿನ ಷರತ್ತಿನಲ್ಲಿ ನೇಮಕಾತಿ ಪ್ರಕ್ರಿಯೆಯನ್ನು ಆನ್ ಲೈನ್ ತಂತ್ರಾಂಶದ ಮೂಲಕ ನಿರ್ವಹಿಸಲು ಸೂಚಿಸಲಾಗಿರುತ್ತದೆ. ಅದರಂತೆ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿನ 01.01.2016 ರಿಂದ 31.12.2020 ರವರೆಗಿನ ಭೋದಕ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂದ ತಂತ್ರಾಂಶ ಅಭಿವೃದ್ದಿಗೆ ಕ್ರಮವಹಿಸಲಾಗುತಿದ್ದು ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ಪ್ರಸ್ತುತ, ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024 ದಿನಾಂಕ: 25.11.2024 ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ನೇಮಕಾತಿಗಳಲ್ಲಿ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರನೇಮಕಾತಿ ಮಾಡಲು ಅಧಿಸೂಚನೆಗಳನ್ನು ಹೊರಡಿಸುವಂತಿಲ್ಲ ಎಂದು ಸೂಚಿಸಲಾಗಿದೆ. ಅಂತೆಯೆ ಸಮಾಜ ಕಲ್ಯಾಣ ಇಲಾಖೆಯು ಯಾವುದೇ ಆಯ್ಕೆ ಪ್ರಾಧಿಕಾರಗಳು / ನೇಮಕಾತಿ ಪ್ರಾಧಿಕಾರಗಳು ಪರಿಶಿಷ್ಟ ಜಾತಿಯ ಒಳ ಮೀಸಲಾತಿ / ಉಪ ವರ್ಗೀಕರಣದ ಕುರಿತು ಸರ್ಕಾರದ ಆದೇಶ ಹೊರಡಿಸುವವರೆಗೆ ಯಾವುದೇ ಖಾಲಿ ಹುದ್ದೆಗಳನ್ನು ನೇಮಕಾತಿ ಮಾಡಬಾರದೆಂದು ದಿನಾಂಕ: 18.02.2025 ರಂದು ತಿಳಿಸಿರುವುದರಿಂದ ಹುದ್ದೆಗಳ ನೇಮಕಾತಿಗೆ ನಿರ್ಬಂಧವಿರುತ್ತದೆ.

ಸರ್ಕಾರವು ದಿನಾಂಕ: 25.11.2024 ರ ಆದೇಶವನ್ನು ತೆರವುಗೊಳಿಸಿದ ನಂತರ ಅನುದಾನಿತ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

**ಸಂಖ್ಯೆ: ಇಪಿ 278 ಎಸ್‌ಇಎಸ್ 2025**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**